# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 859 |
| ಸದಸ್ಯರ ಹೆಸರು : | ಶ್ರೀ ಪ್ರತಾಪ್ ಸಿಂಹನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ : | 14.07.2023 |
| ಉತ್ತರಿಸುವ ಸಚಿವರು : | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸೇರಿದ ಎಷ್ಟು ಹಾಸ್ಟೆಲ್‌ಗಳು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿವೆ; | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಒಟ್ಟು 75 ವಿದ್ಯಾರ್ಥಿನಿಲಯಗಳು ಕಾರ್ಯ ನಿರ್ವಹಿಸುತ್ತಿವೆ. |
| ಆ) | ಈ ಜಿಲ್ಲೆಯಲ್ಲಿನ ಎಲ್ಲಾ ಹಾಸ್ಟೆಲ್‌ಗಳು ಸ್ವಂತ ಕಟ್ಟಡ ಹೊಂದಿವೆಯೇ; ಹಾಗೂ ಅವುಗಳಿಗೆ ಎಲ್ಲಾ ಮೂಲ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ ; | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈ ಪೈಕಿ 42 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುತ್ತವೆ.<br>ಸ್ವಂತ ಕಟ್ಟಡಗಳಲ್ಲಿರುವ ವಿದ್ಯಾರ್ಥಿನಿಲಯಗಳಿಗೆ ಮಂಜೂರಾತಿ ಸಂಖ್ಯೆಗನುಗುಣವಾಗಿ ಶೌಚಾಲಯ, ಸ್ನಾನಗೃಹ ಹಾಗೂ ಇತ್ಯಾದಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. |
| ಇ) | ಜಿಲ್ಲೆಯಲ್ಲಿ, ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ಹಾಗೂ ಈ ಹಾಸ್ಟೆಲ್‌ಗಳಿಗೆ ಸ್ವಂತ ಕಟ್ಟಡ ನಿರ್ಮಾಣಕ್ಕೆ ಇದುವರೆಗೆ ಏನು ಕ್ರಮ ವಹಿಸಲಾಗಿದೆ; | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 28 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. ಪ್ರಸ್ತುತ, 10 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಇನ್ನುಳಿದ 18 ವಿದ್ಯಾರ್ಥಿನಿಲಯಗಳಿಗೆ ಅನುದಾನದ ಲಭ್ಯತೆಯನುಸಾರ ಹಂತ ಹಂತವಾಗಿ ಸ್ವಂತ ಕಟ್ಟಡ ನಿರ್ಮಾಣ ಕಾರ್ಯವನ್ನು ಕೈಗೊಳ್ಳಲಾಗುತ್ತದೆ. |
| ಈ) | ಸದರಿ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ದೊರೆಯುತ್ತಿರುವ ಸೌಲಭ್ಯಗಳೇನು? (ವಿವರ ನೀಡುವುದು) | ಈ ವಿದ್ಯಾರ್ಥಿನಿಲಯಗಳಲ್ಲಿನ ನಿಲಯಾರ್ಥಿಗಳಿಗೆ ಉಚಿತ ಊಟ ಮತ್ತು ವಸತಿ ಸೌಲಭ್ಯಗಳೊಂದಿಗೆ ಜಮಖಾನ ಬೆಡ್‌ಶೀಟ್, ಲೇಖನಾ ಸಾಮಾಗ್ರಿ, ಶುಚಿ ಸಂಭ್ರಮ ಕಿಟ್, ಪ್ರೋತ್ಸಾಹಧನ, ಸ್ಪೋಕನ್ ಇಂಗ್ಲಿಷ್, ವ್ಯಕ್ತಿತ್ವ ವಿಕಸನ ತರಬೇತಿ, ವಿದ್ಯಾರ್ಥಿನಿಯರಿಗೆ ಕರಾಟೆ ತರಬೇತಿ ಇತ್ಯಾದಿ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. |

**ಸಂಖ್ಯೆ**:ಹಿಂವಕ 345 ಬಿಂಎಂಎಸ್ 2023

**( ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ
ಮತ್ತು ಸಂಸ್ಕೃತಿ ಇಲಾಖೆ ಸಚಿವರು